All India Radio: Bangalore
National Bulletin In Kannada
23.11.2025 07.35 a.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

<>><><*><><<>

ಮುಖ್ಯಾಂಶಗಳು

೧. ಜಿ-೨೦ ನಾಯಕರ ಶೃಂಗಸಭೆ; ಜಾಗತಿಕ ಅಭಿವೃದ್ಧಿಗಾಗಿ ಆರು ಹೊಸ ಉಪಕ್ರಮ ಪ್ರಸ್ತಾಪಿಸಿದ ಪ್ರಧಾನಿ ನರೇಂದ್ರ ಮೋದಿ

೨. ಉಪರಾ?ಪತಿ ಸಿ.ಪಿ.ರಾಧಾಕೃಷ್ಣನ್ ಇಂದು ಆಂಧ್ರಪ್ರದೇಶ ಭೇಟಿ; ಸತ್ಯಸಾಯಿ ಬಾಬಾ ಶತಮಾನೋತ್ಸವದಲ್ಲಿ ಭಾಗಿ

೩. ಬ್ರೆಜಿಲ್‌ನಲ್ಲಿ ಕಾಪ್-೩೦ ಶೃಂಗಸಭೆ ಸಂಪನ್ನ; ಹವಾಮಾನ ಬದಲಾವಣೆಯ ಬಿಕ್ಕಟ್ಟು ಪರಿಹಾರಕ್ಕೆ ವಿಶ್ವ ನಾಯಕರ ಸಹಮತ

೪. ಆಸ್ಟ್ರೇಲಿಯನ್ ಓಪನ್ ಬ್ಯಾಡ್ಮಿಂಟನ್; ಪುರುಷರ ಸಿಂಗಲ್ಸ್ ಫೈನಲ್‌ನಲ್ಲಿಂದು ಭಾರತದ ಲಕ್ಷ್ಯ ಸೇನ್ ಪ್ರಶಸ್ತಿಗಾಗಿ ಸ್ಪರ್ಧೆ

<>><><*><><<>

ದಕ್ಷಿಣ ಆಫ್ರಿಕಾದ ಜೋಹಾನ್ಸ್‌ಬರ್ಗ್‌ನಲ್ಲಿ ನಿನ್ನೆ ನಡೆದ ಜಿ೨೦ ನಾಯಕರ ಶೃಂಗಸಭೆಯ ಉದ್ಘಾಟನಾ ದಿನದಂದು ಪ್ರಧಾನಿ ನರೇಂದ್ರ ಮೋದಿ ಅವರು ಜಾಗತಿಕ ಅಭಿವೃದ್ಧಿಯನ್ನು ಗುರಿಯಾಗಿಟ್ಟುಕೊಂಡು ಆರು ಹೊಸ ಉಪಕ್ರಮಗಳನ್ನು ಪ್ರಸ್ತಾಪಿಸಿದರು. ಇವುಗಳಲ್ಲಿ ಜಾಗತಿಕ ಸಾಂಪ್ರದಾಯಿಕ ಜ್ಞಾನ ಭಂಡಾರ ಸ್ಥಾಪನೆ, ಆಫ್ರಿಕಾ ಕೌಶಲ್ಯ ಗುಣಕ ಕಾರ್ಯಕ್ರಮ, ಜಾಗತಿಕ ಆರೋಗ್ಯ ರಕ್ಷಣಾ ಪ್ರತಿಕ್ರಿಯೆ ತಂಡ, ಮಾದಕವಸ್ತು-ಭಯೋತ್ಪಾದನೆಯನ್ನು ಎದುರಿಸುವ ಉಪಕ್ರಮ, ಮುಕ್ತ ಉಪಗ್ರಹ ದತ್ತಾಂಶ ಪಾಲುದಾರಿಕೆ ಮತ್ತು ನಿರ್ಣಾಯಕ ಖನಿಜಗಳ ಉಪಕ್ರಮ ಸೇರಿವೆ. ಶೃಂಗಸಭೆಯ ಎರಡು ಅಧಿವೇಶನಗಳನ್ನುದ್ದೇಶಿಸಿ ಮಾತನಾಡಿದ ಅವರು, ಈ ಉಪಕ್ರಮಗಳು ಭಾರತದ ಬೆಳವಣಿಗೆ, ಅಭಿವೃದ್ಧಿ ಮತ್ತು ಎಲ್ಲರಿಗೂ ಯೋಗಕ್ಷೇಮದ ವಿಧಾನವನ್ನು ವಿವರಿಸುತ್ತವೆ ಮತ್ತು ಸರ್ವತೋಮುಖ ಬೆಳವಣಿಗೆಯನ್ನು ಸಾಧಿಸಲು ಸಹಾಯ ಮಾಡುತ್ತವೆ ಎಂದು ಹೇಳಿದರು.

ಅಂತರ್ಗತ ಮತ್ತು ಸುಸ್ಥಿರ ಆರ್ಥಿಕ ಬೆಳವಣಿಗೆಯ ಕುರಿತಾದ ಮೊದಲ ಅಧಿವೇಶನದಲ್ಲಿ ಮಾತನಾಡಿದ ಪ್ರಧಾನಿ, ಜಿ೨೦ ಜಾಗತಿಕ ಸಾಂಪ್ರದಾಯಿಕ ಜ್ಞಾನ ಭಂಡಾರವು ಭವಿಷ್ಯದ ಪೀಳಿಗೆಯ ಪ್ರಯೋಜನಕ್ಕಾಗಿ ಮನುಕುಲದ ಸಾಮೂಹಿಕ ಜ್ಞಾನವನ್ನು ಬಳಸಿಕೊಳ್ಳುತ್ತದೆ ಎಂದು ಹೇಳಿದರು. ಆಫ್ರಿಕಾ ಕೌಶಲ್ಯ ಗುಣಕ ಕಾರ್ಯಕ್ರಮವು ಆಫ್ರಿಕಾದ ಯುವಕರನ್ನು ಕೌಶಲ್ಯಪೂರ್ಣಗೊಳಿಸಲು ಒಂದು ದಶಲಕ್ಷ ಪ್ರಮಾಣೀಕೃತ ತರಬೇತುದಾರರ ಗುಂಪನ್ನು ಸ್ಥಾಪಿಸುವ ಗುರಿಯನ್ನು ಹೊಂದಿದೆ. ಜಿ-೨೦ ಜಾಗತಿಕ ಆರೋಗ್ಯ ರಕ್ಷಣಾ ಪ್ರತಿಕ್ರಿಯೆ ತಂಡವನ್ನು ಸ್ಥಾಪಿಸುವ ಬಗ್ಗೆಯೂ ಪ್ರಧಾನಿ ಪ್ರಸ್ತಾಪಿಸಿದರು, ಇದರಲ್ಲಿ ಜಿ೨೦ ದೇಶಗಳ ಆರೋಗ್ಯ ರಕ್ಷಣಾ ತಜ್ಞರು ಇರುತ್ತಾರೆ ಮತ್ತು ವಿಶ್ವದ ಯಾವುದೇ ಭಾಗದಲ್ಲಿ ಜಾಗತಿಕ ಆರೋಗ್ಯ ಸವಾಲುಗಳನ್ನು ಎದುರಿಸಲು ನಿಯೋಜಿಸಬಹುದು.

<>><><*><><<>

ಮಾದಕವಸ್ತು ಕಳ್ಳಸಾಗಣೆಯ ಸವಾಲನ್ನು ನಿವಾರಿಸಲು ಮತ್ತು ಮಾದಕವಸ್ತು ಮತ್ತು ಭಯೋತ್ಪಾದನಾ ಆರ್ಥಿಕತೆಯನ್ನು ನಾಶಪಡಿಸಲು ಮಾದಕವಸ್ತು-ಭಯೋತ್ಪಾದನಾ ನೆಕ್ಸಸ್ ಅನ್ನು ಎದುರಿಸುವ ಕುರಿತು ಜಿ-೨೦ ಉಪಕ್ರಮವನ್ನು ಸಹ ಅವರು ಸೂಚಿಸಿದರು. ‘ಒಂದು ಸ್ಥಿತಿಸ್ಥಾಪಕ ಜಗತ್ತು’ ಕುರಿತ ಎರಡನೇ ಅಧಿವೇಶನದಲ್ಲಿ ಮಾತನಾಡಿದ ಪ್ರಧಾನಿ, ನಿರ್ಣಾಯಕ ಖನಿಜಗಳ ಉಪಕ್ರಮ, ಮರುಬಳಕೆ, ನಗರ ಗಣಿಗಾರಿಕೆ, ಸೆಕೆಂಡ್-ಲೈಫ್ ಬ್ಯಾಟರಿ ಯೋಜನೆಗಳು ಮತ್ತು ಸಂಬಂಧಿತ ನಾವೀನ್ಯತೆಗಳನ್ನು ಉತ್ತೇಜಿಸುತ್ತದೆ ಎಂದು ಪ್ರಸ್ತಾಪಿಸಿದರು. ಭಾರತವು ಸುಸ್ಥಿರತೆ ಮತ್ತು ಶುದ್ಧ ಇಂಧನಕ್ಕೆ ಸಂಪೂರ್ಣವಾಗಿ ಬದ್ಧವಾಗಿದೆ ಎಂದು ಪ್ರಧಾನಿ ಪ್ರತಿಪಾದಿಸಿದರು. ಮುಕ್ತ ಉಪಗ್ರಹ ದತ್ತಾಂಶ ಪಾಲುದಾರಿಕೆಯಲ್ಲಿ, ಈ ಕಾರ್ಯಕ್ರಮದ ಮೂಲಕ, ಜಿ-೨೦ ಬಾಹ್ಯಾಕಾಶ ಸಂಸ್ಥೆಗಳ ಉಪಗ್ರಹ ದತ್ತಾಂಶವನ್ನು ಅಭಿವೃದ್ಧಿಶೀಲ ರಾಷ್ಟ್ರಗಳಿಗೆ, ವಿಶೇಷವಾಗಿ ಜಾಗತಿಕ ದಕ್ಷಿಣಕ್ಕೆ, ಕೃಷಿ, ಮೀನುಗಾರಿಕೆ, ವಿಪತ್ತು ನಿರ್ವಹಣೆ ಮತ್ತು ಇತರ ಚಟುವಟಿಕೆಗಳಿಗೆ ಲಭ್ಯವಾಗುವಂತೆ ಮಾಡಲಾಗುವುದು ಎಂದು ಅವರು ಹೇಳಿದರು. ಎರಡನೇ ಅಧಿವೇಶನದಲ್ಲಿ, ಜಾಗತಿಕ ಆಹಾರ ಭದ್ರತೆಯನ್ನು ಬಲಪಡಿಸಲು ಹವಾಮಾನ ಕಾರ್ಯಸೂಚಿಯ ಕುರಿತು ಹೆಚ್ಚಿನ ಸಾಮೂಹಿಕ ಕ್ರಮ ಕೈಗೊಳ್ಳುವಂತೆ ಪ್ರಧಾನಿ ಕರೆ ನೀಡಿದರು. ಭಾರತವು ಈ ಕ್ಷೇತ್ರಗಳಲ್ಲಿ ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿದೆ. ಮಾನವ ಕೇಂದ್ರಿತ, ಎಲ್ಲರನ್ನೂ ಒಳಗೊಳ್ಳುವ ಮತ್ತು ಜಾಗತಿಕ ಸಹಕಾರದಲ್ಲಿ ಬೇರೂರಿರುವ ಭವಿಷ್ಯವನ್ನು ನಿರ್ಮಿಸುತ್ತಿದೆ ಎಂದು ಅವರು ಹೇಳಿದರು.

<>><><*><><<>

ಇಂದು ಜಿ-೨೦ ನಾಯಕರ ಶೃಂಗಸಭೆ ಇಂದು ಸಮಾರೋಪಗೊಳ್ಳಲಿದೆ. ಶೃಂಗಸಭೆಯ ಮೂರನೇ ಅಧಿವೇಶನದಲ್ಲಿ ಇಂದು ಪ್ರಧಾನಿ ನರೇಂದ್ರ ಮೋದಿ ಭಾಗವಹಿಸಲಿದ್ದಾರೆ. ಅಧಿವೇಶನಕ್ಕೂ ಮುನ್ನ ಪ್ರಧಾನಿ, ಭಾರತ-ಬ್ರೆಜಿಲ್-ದಕ್ಷಿಣ ಆಫ್ರಿಕಾ ನಾಯಕರ ಸಭೆಯಲ್ಲಿ ಭಾಗವಹಿಸಲಿದ್ದಾರೆ. ಇಂದು ಶೃಂಗಸಭೆಯ ನೇಪಥ್ಯದಲ್ಲಿ ಪ್ರಧಾನಿ ಮೋದಿ ಅವರು ದಕ್ಷಿಣ ಆಫ್ರಿಕಾದ ಅಧ್ಯಕ್ಷ ಸಿರಿಲ್ ರಾಮಫೋಸಾ, ಜಪಾನ್ ಪ್ರಧಾನಿ ಸನೇ ಟಕಾ, ಕೆನಡಾ ಪ್ರಧಾನಿ ಮಾರ್ಕ್ ಕಾರ್ನಿ ಮತ್ತು ಇಟಲಿ ಪ್ರಧಾನಿ ಜಾರ್ಜಿಯಾ ಮೆಲೋನಿ. ಅವರೊಂದಿಗೆ ದ್ವಿಪಕ್ಷೀಯ ಸಭೆಗಳನ್ನು ನಡೆಸಲಿದ್ದಾರೆ. ನಂತರ, ಸಂಜೆ, ಪ್ರಧಾನಿ ಮೋದಿ ನವದೆಹಲಿಗೆ ಮರಳಲಿದ್ದಾರೆ.

<>><><*><><<>

ಜೋಹಾನ್ಸ್‌ಬರ್ಗ್‌ನಲ್ಲಿ ನಡೆಯುತ್ತಿರುವ ಜಿ೨೦ ನಾಯಕರ ಶೃಂಗಸಭೆಯ ನೇಪಥ್ಯದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಇಥಿಯೋಪಿಯಾ ಪ್ರಧಾನಿ ಅಬಿ ಅಹ್ಮದ್ ಅಲಿ ಅವರನ್ನು ಭೇಟಿಯಾದರು. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ, ಎರಡೂ ದೇಶಗಳ ನಡುವಿನ ದೀರ್ಘಕಾಲದ ಸಂಬಂಧ ಮತ್ತು ಪ್ರಮುಖ ಕ್ಷೇತ್ರಗಳಲ್ಲಿ ಸಹಕಾರವನ್ನು ಬಲಪಡಿಸುವ ಯೋಜನೆಗಳನ್ನು ಪ್ರಸ್ತಾಪಿಸಿದರು. ಭಾರತ ಮತ್ತು ಇಥಿಯೋಪಿಯಾ, ಇತಿಹಾಸದಲ್ಲಿ ಬೇರೂರಿರುವ ಪಾಲುದಾರಿಕೆಯನ್ನು ಹಂಚಿಕೊಂಡಿವೆ ಮತ್ತು ತಂತ್ರಜ್ಞಾನ, ಕೌಶಲ್ಯ ಮತ್ತು ಇತರ ಕ್ಷೇತ್ರಗಳಲ್ಲಿ ಸಂಬಂಧಗಳನ್ನು ಬಲಗೊಳಿಸಲಾಗುತ್ತಿದೆ ಎಂದು ಹೇಳಿದ್ದಾರೆ. ಆಫ್ರಿಕಾದ ಅತಿದೊಡ್ಡ ಆರ್ಥಿಕತೆಗಳಲ್ಲಿ ಒಂದಾದ ಮತ್ತು ಸಾಮರ್ಥ್ಯವರ್ಧನೆ, ವ್ಯಾಪಾರ ಮತ್ತು ಅಭಿವೃದ್ಧಿ ಕಾರ್ಯಕ್ರಮಗಳಲ್ಲಿ ದೀರ್ಘಕಾಲದ ಪಾಲುದಾರ ಇಥಿಯೋಪಿಯಾದೊಂದಿಗೆ ಭಾರತ ತನ್ನ ತೊಡಗಿಸಿಕೊಳ್ಳುವಿಕೆಯನ್ನು ಮುಂದುವರಿಸಲಿದೆ ಹಾಗೂ ಭಾರತೀಯ ಕಂಪನಿಗಳು ಇಥಿಯೋಪಿಯಾದಲ್ಲಿ ಉತ್ಪಾದನೆ, ಜವಳಿ, ಔ?ಧಗಳು ಮತ್ತು ಮಾಹಿತಿ ತಂತ್ರಜ್ಞಾನದಂತಹ ಕ್ಷೇತ್ರಗಳಲ್ಲಿ ಸಕ್ರಿಯ ಹೂಡಿಕೆದಾರರಾಗಿವೆ ಎಂದು ಹೇಳಿದ್ದಾರೆ. ಈ ನಡುವೆ ಐಟಿ, ಸಾರ್ವಜನಿಕ ಆಡಳಿತ, ಆರೋಗ್ಯ ರಕ್ಷಣೆ ಮತ್ತು ವೃತ್ತಿಪರ ಕೌಶಲ್ಯಗಳಂತಹ ಕ್ಷೇತ್ರಗಳನ್ನು ಒಳಗೊಂಡಂತೆ ಭಾರತೀಯ ತಾಂತ್ರಿಕ ಮತ್ತು ಆರ್ಥಿಕ ಸಹಕಾರ ಯೋಜನೆಯಡಿಯಲ್ಲಿ ಇಥಿಯೋಪಿಯನ್ ವೃತ್ತಿಪರರಿಗೆ ಭಾರತ ವ್ಯಾಪಕ ತರಬೇತಿ ಕಾರ್ಯಕ್ರಮಗಳನ್ನು ಒದಗಿಸಿದೆ.

<>><><*><><<>

ದಕ್ಷಿಣ ಆಫ್ರಿಕಾದ ಜೋಹಾನ್ಸ್‌ಬರ್ಗ್‌ನಲ್ಲಿ ನಡೆದ ಜಿ-೨೦ ಶೃಂಗಸಭೆಯಲ್ಲಿನ ನಾಯಕರು, ಅಮೆರಿಕದ ವಿರೋಧದ ಹೊರತಾಗಿಯೂ, ಒಮ್ಮತದ ಮೂಲಕ ಜಂಟಿ ಘೋಷಣಾ ಪತ್ರವನ್ನು ಅಂಗೀಕರಿಸಿದ್ದಾರೆ.

ಒಗ್ಗಟ್ಟು, ಸಮಾನತೆ ಮತ್ತು ಸುಸ್ಥಿರತೆಯು ಎಲ್ಲರನ್ನೂ ಒಳಗೊಂಡ ಜಾಗತಿಕ ಬೆಳವಣಿಗೆಯ ಅಗತ್ಯ ಸ್ತಂಭಗಳಾಗಿವೆ ಎಂದು ಈ ಘೋಷಣೆ ಒತ್ತಿ ಹೇಳಿದೆ.  ೩೯ ಪುಟಗಳ ಈ ದಾಖಲೆಯಲ್ಲಿ, ಇಂಧನ ಭದ್ರತೆ, ಹವಾಮಾನ ಕ್ರಮ ಮತ್ತು ವಿಪತ್ತು ಸ್ಥಿತಿಸ್ಥಾಪಕತ್ವವನ್ನು ಪ್ರಮುಖವಾಗಿ ಉಲ್ಲೇಖಿಸಲಾಗಿದ್ದು, ಹೆಚ್ಚುತ್ತಿರುವ ಭೌಗೋಳಿಕ ರಾಜಕೀಯ ಉದ್ವಿಗ್ನತೆಗಳು, ಸಂಘರ್ಷಗಳು ಮತ್ತು ಆಳವಾಗುತ್ತಿರುವ ಅಸಮಾನತೆ, ಆರ್ಥಿಕ ಸ್ಥಿರತೆಗೆ ಬೆದರಿಕೆಯಾಗಿದೆ ಎಂಬುದನ್ನು ಒಪ್ಪಿಕೊಳ್ಳಲಾಗಿದೆ.

<>><><*><><<>

ನಿರ್ಣಾಯಕ ಮತ್ತು ಉದಯೋನ್ಮುಖ ತಂತ್ರಜ್ಞಾನಗಳಲ್ಲಿ ಸಹಕಾರವನ್ನು ಹೆಚ್ಚಿಸಲು ಆಸ್ಟ್ರೇಲಿಯಾ-ಕೆನಡಾ-ಭಾರತ ತಂತ್ರಜ್ಞಾನ ಮತ್ತು ನಾವೀನ್ಯತಾ ಪಾಲುದಾರಿಕೆ- ಎಸಿಐಟಿಐ ಎಂಬ ಹೊಸ ತ್ರಿಪಕ್ಷೀಯ ಚೌಕಟ್ಟನ್ನು ಭಾರತ, ಆಸ್ಟ್ರೇಲಿಯಾ ಮತ್ತು ಕೆನಡಾ ಘೋಷಿಸಿವೆ.  ನಿನ್ನೆ ಜೋಹಾನ್ಸ್‌ಬರ್ಗ್‌ನಲ್ಲಿ ನಡೆದ ಜಿ೨೦ ಶೃಂಗಸಭೆಯ ನೇಪಥ್ಯದಲ್ಲಿ ಪ್ರಧಾನಿ ನರೇಂದ್ರ ಮೋದಿ, ಆಸ್ಟ್ರೇಲಿಯಾ ಪ್ರಧಾನಿ ಆಂಥೋನಿ ಅಲ್ಬನೀಸ್ ಮತ್ತು ಕೆನಡಾ ಪ್ರಧಾನಿ ಮಾರ್ಕ್ ಕಾರ್ನಿ ನಡುವಿನ ಸಭೆಯ ನಂತರ ಈ ಪಾಲುದಾರಿಕೆಯನ್ನು ಘೋಷಿಸಲಾಗಿದೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ, ಈ ಪಾಲುದಾರಿಕೆಯು ಪ್ರಮುಖ ತಂತ್ರಜ್ಞಾನ ಮತ್ತು ನಾವೀನ್ಯತೆ ಕ್ಷೇತ್ರಗಳಲ್ಲಿ ಸಹಕಾರವನ್ನು ವಿಸ್ತರಿಸಲು ಸಹಾಯ ಮಾಡುತ್ತದೆ ಎಂದು ಹೇಳಿದ್ದಾರೆ.

<>><><*><><<>

ಉಪರಾ?ಪತಿ ಸಿ.ಪಿ.ರಾಧಾಕೃಷ್ಣನ್ ಇಂದು ಆಂಧ್ರಪ್ರದೇಶದ ಪುಟ್ಟಪರ್ತಿಯ ಶ್ರೀ ಸತ್ಯಸಾಯಿ ಹಿಲ್ ವ್ಯೂ ಕ್ರೀಡಾಂಗಣದಲ್ಲಿ ನಡೆಯಲಿರುವ ಸತ್ಯಸಾಯಿ ಬಾಬಾ ಅವರ ಭವ್ಯ ಶತಮಾನೋತ್ಸವ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ. ನಂತರ, ಉಪರಾ?ಪತಿಗಳು ಪಾಲಸಮುದ್ರಂನಲ್ಲಿರುವ ರಾಷ್ಟ್ರೀಯ ಕಸ್ಟಮ್ಸ್, ಪರೋಕ್ಷ ತೆರಿಗೆಗಳು ಮತ್ತು ಮಾದಕ ದ್ರವ್ಯಗಳ ಅಕಾಡೆಮಿಯ ಹೊಸ ಕ್ಯಾಂಪಸ್‌ಗೆ ಭೇಟಿ ನೀಡಲಿದ್ದಾರೆ ಮತ್ತು ಅವರ ವಿಶೇ? ಫೌಂಡೇಶನ್ ಕೋರ್ಸ್‌ಗೆ ಹಾಜರಾಗುತ್ತಿರುವ ಅಖಿಲ ಭಾರತ ಸೇವೆಗಳು ಮತ್ತು ಕೇಂದ್ರ ನಾಗರಿಕ ಸೇವೆಗಳ ಅಧಿಕಾರಿ ತರಬೇತಿದಾರರನ್ನು ಉದ್ದೇಶಿಸಿ ಮಾತನಾಡಲಿದ್ದಾರೆ.

<>><><*><><<>

ಬ್ರೆಜಿಲ್‌ನಲ್ಲಿ, ವಿಶ್ವಸಂಸ್ಥೆಯ ಹವಾಮಾನ ಸಮ್ಮೇಳನದಲ್ಲಿ ವಿಶ್ವ ನಾಯಕರು ಹವಾಮಾನ ಬದಲಾವಣೆಯ ಬಿಕ್ಕಟ್ಟನ್ನು ಪರಿಹರಿಸಲು ಪ್ರಯತ್ನಿಸುವ ಒಪ್ಪಂದಕ್ಕೆ ಸಹಮತ ವ್ಯಕ್ತಪಡಿಸಿದ್ದಾರೆ, ಆದರೆ ಹವಾಮಾನ ಬದಲಾವಣೆಗೆ ಕಾರಣವಾಗುವ ಪಳೆಯುಳಿಕೆ ಇಂಧನಗಳನ್ನು ಹಂತಹಂತವಾಗಿ ತೆಗೆದುಹಾಕುವ ಬಗ್ಗೆ ಯಾವುದೇ ಉಲ್ಲೇಖವನ್ನು ಒಪ್ಪಂದ ಒಳಗೊಂಡಿಲ್ಲ. ಪಳೆಯುಳಿಕೆ ಇಂಧನವನ್ನು ಹಂತಹಂತವಾಗಿ ತೆಗೆದುಹಾಕುವ ಬಗ್ಗೆ ಆಳವಾದ ಭಿನ್ನಾಭಿಪ್ರಾಯಗಳ ನಡುವೆ, ಬ್ರೆಜಿಲ್‌ನ ಬೆಲೆಮ್ ನಗರದಲ್ಲಿ ಎರಡು ವಾರಗಳ ಕಾಪ್೩೦ ಶೃಂಗಸಭೆಯಲ್ಲಿ ಮಾತುಕತೆಗಳು ರಾತ್ರಿಯಿಡೀ ನಡೆದ ನಂತರ ಒಪ್ಪಂದವನ್ನು ಅನುಮೋದಿಸಲಾಗಿದೆ.

<>><><*><><<>

ಕರ್ನಾಟಕ ಸರ್ಕಾರ ಸರ್ವಪಕ್ಷ ಸಭೆಯನ್ನು ಕರೆದು ಮೇಕೆದಾಟು ಯೋಜನೆಯ ಕುರಿತು ಸುಪ್ರೀಂ ಕೋರ್ಟ್ ಆದೇಶದ ಬಗ್ಗೆ ದೆಹಲಿಯಲ್ಲಿ ಎಲ್ಲಾ ಪಕ್ಷದ ಸಂಸದರು ಮತ್ತು ನಾಯಕರೊಂದಿಗೆ ಚರ್ಚಿಸುವ ಚಿಂತನೆಯಿದೆ ಎಂದು ಕರ್ನಾಟಕ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಮೇಕೆದಾಟು ಯೋಜನೆಯ ಕುರಿತು ಸುಪ್ರೀಂ ಕೋರ್ಟ್ ನೀಡಿದ ಆದೇಶವನ್ನು ಅನುಸರಿಸಿ ಕರ್ನಾಟಕ ಸರ್ಕಾರ ಹೇಗೆ ಮುಂದುವರಿಯುತ್ತದೆ ಎಂಬುದರ ಕುರಿತು ವಿವರಿಸಿರುವ ಅವರು, ಸುಪ್ರೀಂ ಕೋರ್ಟ್ ತೀರ್ಪು ನೀಡಿದ್ದು, ಅದನ್ನು ತ್ವರಿತವಾಗಿ ಜಾರಿಗೆ ತರಲು ಸೂಚಿಸಿದೆ. ರಾಜ್ಯ, ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ, ಕಾವೇರಿ ನೀರು ನಿಯಂತ್ರಣ ಸಮಿತಿ ಮತ್ತು ಕೇಂದ್ರ ಜಲ ಆಯೋಗ ಈ ಬಗ್ಗೆ ಕಾಳಜಿ ವಹಿಸಲಿದೆ ಎಂದರು. ಸುಪ್ರೀಂ ಕೋರ್ಟ್‌ನಲ್ಲಿ ಯಾವುದೇ ಪ್ರಕರಣಗಳು ಬಾಕಿ ಉಳಿದಿಲ್ಲ ಎಂದು ಮಾಹಿತಿ ನೀಡಿದ್ದಾರೆ.

<>><><*><><<>

ಸಿಡ್ನಿಯಲ್ಲಿ ನಡೆಯುತ್ತಿರುವ ಆಸ್ಟ್ರೇಲಿಯನ್ ಓಪನ್ ಬ್ಯಾಡ್ಮಿಂಟನ್‌ನ ಪುರುಷರ ಸಿಂಗಲ್ಸ್ ವಿಭಾಗದ ಫೈನಲ್ ಪಂದ್ಯದಲ್ಲಿಂದು ಭಾರತೀಯ ಶಟ್ಲರ್ ಲಕ್ಷ್ಯ ಸೇನ್, ಜಪಾನ್‌ನ ೨೬ ನೇ ಶ್ರೇಯಾಂಕಿತ ಯುಶಿ ತನಕಾ ಅವರನ್ನು ಎದುರಿಸಲಿದ್ದಾರೆ. ನಿನ್ನೆ ನಡೆದ ಸೆಮಿಫೈನಲ್‌ನಲ್ಲಿ ಅವರು ಎರಡನೇ ಶ್ರೇಯಾಂಕದ ಚೈನೀಸ್ ತೈಪೆಯ ಚೌ ಟೀನ್-ಚೆನ್ ಅವರನ್ನು ೧೭-೨೧, ೨೪-೨೨, ೨೧-೧೬ ಸೆಟ್‌ಗಳಿಂದ ಸೋಲಿಸಿದರು.

<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>

<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ ><><<>